# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಷ್ಟ್ರೀಯ ಶಿಕ್ಷಣ ನೀತಿ-2020 ಯನ್ನು ಜಾಗೃತಿಗೊಳಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್‌ಇ 2019,, ಬೆಂಗಳೂರು, ದಿನಾಂಕ: 17.12.2020.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್‌ಇ 2019,, ಬೆಂಗಳೂರು, ದಿನಾಂಕ 19.06.2021.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 260 ಯುಎನ್‌ಇ 2019 (ಭಾಗ-1), ಬೆಂಗಳೂರು, ದಿನಾಂಕ:07.08.2021.
4. ಸರ್ಕಾರದ ಆದೇಶ ಸಂಖ್ಯೆ:ಇಡಿ 260 ಯುಎನ್‌ಇ 2019 (ಭಾಗ-1), ದಿನಾಂಕ:13.08.2021.
5. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಪತ್ರ ಸಂಖ್ಯೆ: ಕರಾಉಶಿಪ/49/NEP Implementation/2021-22/397, ದಿನಾಂಕ: 18.08.2021.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ (1) ದಿನಾಂಕ:17.12.2020 ರ ಆದೇಶದಲ್ಲಿ, ಭಾರತ ಸರ್ಕಾರವು ಪ್ರಕಟಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಯೋಜನಾ ಬದ್ಧವಾಗಿ ಮತ್ತು ಸಮರ್ಪಕವಾಗಿ ಕರ್ನಾಟಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ದಿನಾಂಕ: 19.06.2021 ರ ಆದೇಶದಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ- 2020 ನೇ ಸಾಲಿನಿಂದ ಸಮರ್ಪಕವಾಗಿ ಕಾರ್ಯಗತಗೊಳಿಸಲು ಸಂಬಂಧಪಟ್ಟ ವಿವಿಧ ನಿಖಾಯವಾರು (faculty wise) ತಜ್ಞರ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿನ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ, 2021-22 ಶೈಕ್ಷಣಿಕ ಸಾಲಿನಿಂದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸಲು ಹಾಗೂ ಅದಕ್ಕೆ ಪೂರಕವಾದ ಪಠ್ಯಕ್ರಮ ತಯಾರಿಸಬೇಕೆಂದು ಉನ್ನತ ಶಿಕ್ಷಣ ಪರಿಷತ್ತಿನ ವರದಿಯಲ್ಲಿ ಕೋರಿದ್ದು, ಸದರಿ ವರದಿಯನ್ನು ಪರಿಶೀಲಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶ ದಿನಾಂಕ: 07.08.2021 ರಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ-2020 ನ್ನು ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ 2021-22ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಕೆಲವೊಂದು ಮಾರ್ಗಸೂಚಿ ಮತ್ತು ಪ್ರೋಗ್ರಾಮ್ ವಿನ್ಯಾಸದೊಂದಿಗೆ ಅನುಷ್ಠಾನಗೊಳಿಸಿ ಆದೇಶಿಸಲಾಗಿದೆ.

ಮುಂದುವರೆದು, ಮೇಲೆ ಓದಲಾದ ಕ್ರಮ ಸಂಖ್ಯೆ (4) ದಿನಾಂಕ:13.08.2021 ರಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ – 2020 ನ್ನು, 2021-22 ನೇ ಶೈಕ್ಷಣಿಕ ಸಾಲಿನಿಂದ ಸಮರ್ಪಕವಾಗಿ ಕಾರ್ಯಗತಗೊಳಿಸಲು ಪದವಿ ಮತ್ತು ಸ್ನಾತಕೋತ್ತರ ಪದವಿಗಳ ವಿಷಯವಾರು ಮಾದರಿ ಪಠ್ಯಕ್ರಮಗಳನ್ನು ಸಿದ್ಧಪಡಿಸಲು ವಿಷಯ ತಜ್ಞರ ಸಮಿತಿಗಳನ್ನು ರಚಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5) ದಿನಾಂಕ: 18.08.2021 ರ ಪತ್ರದಲ್ಲಿ, ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಜಾರಿಗೊಳಿಸುವ ಯೋಜನೆಗೆ ಸಂಬಂಧಿಸಿದಂತೆ, ಪೂರಕ

ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾಗಿರುವುದರಿಂದ, **"New Education Policy Implementation plan"** ಗೆ ಸಂಬಂಧಿಸಿದ ಯೋಜನೆಗಳನ್ನು ಹಮ್ಮಿಕೊಳ್ಳಲು ಸೂಕ್ತ ಆದೇಶ ಹೊರಡಿಸುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ರವರು ಕೋರಿರುತ್ತಾರೆ.

ಅದರನ್ವಯ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 6 ವಿವಿಧ 2021, ಬೆಂಗಳೂರು,**
**ದಿನಾಂಕ: 31.08.2021**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ರಾಷ್ಟ್ರೀಯ ಶಿಕ್ಷಣ ನೀತಿ – 2020 ನ್ನು ರಾಜ್ಯದಲ್ಲಿ ಯಶಸ್ವಿಯಾಗಿ ಜಾರಿಗೊಳಿಸುವ ಸಂಬಂಧ, **"ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನ ಯೋಜನೆ" ಯನ್ನು** ವಿಶ್ವವಿದ್ಯಾಲಯ/ ಕಾಲೇಜುಗಳ ಮಟ್ಟದಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಈ ಕೆಳಕಂಡ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಆದೇಶಿಸಿದೆ.

**ರಾಷ್ಟ್ರೀಯ ಶಿಕ್ಷಣ ನೀತಿ ಸಹಾಯ ಕೇಂದ್ರ**

i. ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ನಲ್ಲಿ ರಾಜ್ಯ ಮಟ್ಟದ ಸಹಾಯ ಕೇಂದ್ರ
ii. ವಿಶ್ವವಿದ್ಯಾಲಯ ಮಟ್ಟದ ಸಹಾಯ ಕೇಂದ್ರ
iii. ಕಾಲೇಜು ಮಟ್ಟದ ಸಹಾಯ ಕೇಂದ್ರ

**ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಹಮ್ಮಿಕೊಳ್ಳಬೇಕಾದ ಜಾಗೃತಿ ಕಾರ್ಯಕ್ರಮದ ವಿವರ**

i. ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಕಾಲೇಜು ಶಿಕ್ಷಕರಿಗೆ ಉನ್ನತ ಶಿಕ್ಷಣ ಅಕಾಡೆಮಿ, ಧಾರವಾಡ ವತಿಯಿಂದ ಒಂದು ದಿನದ ಕಾರ್ಯಾಗಾರ
ii. ಪ್ರತಿ ವಿಶ್ವವಿದ್ಯಾನಿಲಯವು ಎಲ್ಲಾ ಅಂಗಸಂಸ್ಥೆ ಕಾಲೇಜುಗಳ ಶಿಕ್ಷಕರಿಗೆ/ಪ್ರಾಂಶುಪಾಲರಿಗೆ ಮತ್ತು ಆಡಳಿತ ಮಂಡಳಿಗಳಿಗೆ **ರಾಷ್ಟ್ರೀಯ ಶಿಕ್ಷಣ ನೀತಿ** ಬಗ್ಗೆ ಕಾರ್ಯಾಗಾರಗಳನ್ನು ನಡೆಸುವುದು. ಈ ಕಾರ್ಯಾಗಾರಗಳಿಗೆ ವಿದ್ಯಾರ್ಥಿಗಳು ಮತ್ತು ಪೋಷಕರನ್ನು ಕೂಡಾ ಆಹ್ವಾನಿಸುವುದು.
iii. ಜಿಲ್ಲಾ ಮಟ್ಟದಲ್ಲಿ ಪ್ರತಿ ವಿಶ್ವವಿದ್ಯಾಲಯ ತನ್ನ ಕಾರ್ಯವ್ಯಾಪ್ತಿಯಲ್ಲಿನ ಸಂಬಂಧಪಟ್ಟ ಎಲ್ಲಾ ಪಾಲುದಾರರ (Stakeholders) ನಡುವೆ ಸಮ್ಮೇಳನಗಳನ್ನು ಆಯೋಜಿಸುವುದು.
**iv.** ವಾರದಲ್ಲಿ ಒಂದು ದಿನ ಕಾಲೇಜುಗಳಲ್ಲಿ **ರಾಷ್ಟ್ರೀಯ ಶಿಕ್ಷಣ ನೀತಿ** ಬಗ್ಗೆ ವಿದ್ಯಾರ್ಥಿಗಳು ಮತ್ತು ಪೋಷಕರೊಂದಿಗೆ ಸಂವಾದ ಕಾರ್ಯಕ್ರಮಗಳನ್ನು ಆಯೋಜಿಸುವುದು **(ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ವತಿಯಿಂದ)**
v. **ರಾಷ್ಟ್ರೀಯ ಶಿಕ್ಷಣ ನೀತಿ** ಜಾಗೃತಿಗೊಳಿಸುವ ಸಂಬಂಧ ಪೋಸ್ಟರ್‌ಗಳು, ಬ್ಯಾನರ್‌ಗಳು, ಕರಪತ್ರಗಳು ಇತ್ಯಾದಿಗಳನ್ನು ಪ್ರತಿ ವಿಶ್ವವಿದ್ಯಾನಿಲಯವು ಸಿದ್ಧಪಡಿಸಬೇಕು ಮತ್ತು ಎಲ್ಲಾ ಸಂಯೋಜಿತ ಕಾಲೇಜುಗಳಿಗೆ ಪ್ರಚುರಪಡಿಸಲು ಕಳುಹಿಸಬೇಕು.

vi. ವಿಶ್ವವಿದ್ಯಾಲಯ ಮಟ್ಟದಲ್ಲಿ **ರಾಷ್ಟ್ರೀಯ ಶಿಕ್ಷಣ ನೀತಿಯನ್ನು** ಜಾಗೃತಿ ಮೂಡಿಸುವ ಸಲುವಾಗಿ ವಿಷಯ ತಜ್ಞರಿಂದ (ಉಪಕುಲಪತಿಗಳು, ಅಧ್ಯಾಪಕರು, ಡೀನ್‌ಗಳು ಇತ್ಯಾದಿ) ಯೂಟ್ಯೂಬ್ ಲೈವ್ ಸೆಶನ್‌ಗಳು, ಫೋನ್-ಇನ್‌ಗಳು, ಮಾತುಕತೆಗಳು ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

vii. ರಾಜ್ಯ ಮಟ್ಟದಲ್ಲಿ ಉನ್ನತ ಶಿಕ್ಷಣ ಇಲಾಖೆಯ ಉನ್ನತ ಅಧಿಕಾರಿಗಳು, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಹಾಗೂ ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಅಧಿಕಾರಿಗಳು ಇವರಿಂದ ಯೂಟ್ಯೂಬ್ ಲೈವ್ ಸೆಶನ್‌ಗಳು, ಫೋನ್-ಇನ್‌ಗಳು, ಮಾತುಕತೆ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

viii. **ರಾಷ್ಟ್ರೀಯ ಶಿಕ್ಷಣ ನೀತಿ** ಕುರಿತು ಸಮಗ್ರ ಮಾರ್ಗಸೂಚಿಗಳನ್ನು ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳು ತಮ್ಮ ಅಧಿಕೃತ ವೆಬ್‌ಸೈಟ್‌ಗಳ ಮೂಲಕ ಪ್ರಚುರಪಡಿಸುವುದು.

ix. ಕರ್ನಾಟಕದಲ್ಲಿ **ರಾಷ್ಟ್ರೀಯ ಶಿಕ್ಷಣ ನೀತಿ** ಅನುಷ್ಠಾನದ ಕುರಿತು ಸಮಗ್ರ ಮಾಹಿತಿ ನೀಡಲು ವಿಶೇಷವಾದ "**ರಾಷ್ಟ್ರೀಯ ಶಿಕ್ಷಣ ನೀತಿ, ಕರ್ನಾಟಕ**" ವೆಬ್ ಪೋರ್ಟಲ್ ಅನ್ನು ಪ್ರಾರಂಭಿಸುವುದು. (ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ವತಿಯಿಂದ)

x. "**ರಾಷ್ಟ್ರೀಯ ಶಿಕ್ಷಣ ನೀತಿ,ಕರ್ನಾಟಕ**" ಹೆಸರಿನಲ್ಲಿ ವಿಶೇಷ ಸಾಮಾಜಿಕ ಜಾಲತಾಣಗಳನ್ನು (Twitter, Facebook ಇತ್ಯಾದಿ) ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ವತಿಯಿಂದ ರಚಿಸುವುದು.

xi. ಮುದ್ರಣ ಮತ್ತು ಎಲೆಕ್ಟ್ರಾನಿಕ್ ಮಾಧ್ಯಮದಲ್ಲಿ ವ್ಯಾಪಕ ಪ್ರಚಾರ ಮಾಡುವುದು. (ಟಿವಿ ಮತ್ತು ರೇಡಿಯೋ ಚಾನೆಲ್‌ಗಳು).

ಪ್ರತಿ ವಿಶ್ವವಿದ್ಯಾಲಯ ಮಟ್ಟದಲ್ಲಿ ಉಪಕುಲಪತಿಗಳ ಅಧ್ಯಕ್ಷತೆಯಲ್ಲಿ "**ರಾಷ್ಟ್ರೀಯ ಶಿಕ್ಷಣ ನೀತಿ ಅನುಷ್ಠಾನ ಕಾರ್ಯಪಡೆಯನ್ನು ತಕ್ಷಣವೇ ರಚಿಸುವುದು.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Mahesh

**(ಮಹೇಶ್ ಆರ್)**
ಸರ್ಕಾರದ ಅಧೀನ ಕಾರ್ಯದರ್ಶಿ
**(ವಿಶ್ವವಿದ್ಯಾಲಯ-2)**
ಉನ್ನತ ಶಿಕ್ಷಣ ಇಲಾಖೆ

ಇವರಿಗೆ,

1) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3) ಕುಲಪತಿಗಳು, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಿಗೆ.
4) ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
5) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
6) ಕುಲಸಚಿವರು, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು.
7) ಗೌರವಾನ್ವಿತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ರಾಜಭವನ.